# ಕರ್ನಾಟಕ ಸರ್ಕಾರ
## ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ತರೀಕೆರೆ.
## ಸಿ.ಸಿ.ನಂ. 265/2021

ಪಿ.ಡಬ್ಲ್ಯೂ: 5
ಸಿ.ಡಬ್ಲ್ಯೂ: 4

ಸಾಕ್ಷಿದಾರರ ಹೆಸರು : ಅಶೋಕ
ತಂದೆಯ ಹೆಸರು: :ರಾಮನಾಯ್ಕ
ವಯಸ್ಸು : **26 ವರ್ಷ**
ಉದ್ಯೋಗ : ಕೂಲಿ ಕೆಲಸ
ವಾಸಸ್ಥಳ : ಕರಕುಚ್ಚಿ

**ದಿನಾಂಕ: 08-09-2025 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು**

**ಮುಖ್ಯ ವಿಚಾರಣೆ :** ಸಹಾಯಕ ಸರ್ಕಾರಿ ಅಭಿಯೋಜಕರವರಿಂದ

ಈಗ್ಗೆ ಸುಮಾರು ನಾಲ್ಕು ವರ್ಷಗಳ ಹಿಂದೆ ನಾನು ಕರಕುಚ್ಚಿ ಗ್ರಾಮದಲ್ಲಿ ಮಧ್ಯಾಹ್ನ 2-00 ಗಂಟೆ ಸಮಯದಲ್ಲಿ ನಾನು ಅಂಗಡಿಯ ಹತ್ತಿರ ಕುಳಿತಿರುವಾಗ ಪೊಲೀಸರ ಕೋರಿಕೆಯ ಮೇರೆಗೆ ಒಂದು ದಾಖಲಾತಿಗೆ ಸಹಿ ಮಾಡಿದ್ದು, ಸದರಿ ದಾಖಲೆಯಲ್ಲಿ ಬರೆದಿರುವ ವಿಚಾರಗಳು ನನಗೆ ಗೊತ್ತಿರುವುದಿಲ್ಲ. ನನ್ನ ಸಮಕ್ಷಮದಲ್ಲಿ ಪೊಲೀಸರು ಯಾವುದೇ ವಸ್ತುಗಳನ್ನು ಅಮಾನತ್ತುಪಡಿಸಿಕೊಂಡಿರುವುದಿಲ್ಲ.

ಸಾಕ್ಷಿಗೆ ಒಂದು ದಾಖಲಾತಿಯನ್ನು ತೋರಿಸಲಾಗಿದ್ದು, ಅದು ಸ್ಥಳ ಮಹಜರ್ ಆಗಿದ್ದು, ಸದರಿ ದಾಖಲೆಯನ್ನು ನಿಪಿ-10 ಎಂದು, ಸಾಕ್ಷಿಯ ಸಹಿಯನ್ನು ನಿಪಿ-10(ಎ) ಎಂದು ಗುರುತಿಸಲಾಯಿತು.

ಸಾಕ್ಷಿಗೆ ಒಂದು ಛಾಯಚಿತ್ರವನ್ನು ತೋರಿಸಲಾಗಿದ್ದು, ಅದನ್ನು ನಿಪಿ-11 ಎಂದು ಗುರುತಿಸಲಾಯಿತು.

**(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.)**

**ಪಾಟೀ ಸವಾಲು:** ಸಹಾಯಕ ಸರ್ಕಾರಿ ಅಭಿಯೋಜಕರವರಿಂದ

ದಿ: **24-05-2020** ರಂದು ಮಧ್ಯಾಹ್ನ **12-30** ರಿಂದ **1-30** ಗಂಟೆ ಸಮಯದಲ್ಲಿ ಲಕ್ಕವಳ್ಳಿ ಹೋಬಳಿ, ಭದ್ರಾ ಹೊಳೆಯ ಪಕ್ಕದಲ್ಲಿರುವ ಸಂತೋಷ್ ರವರ ಅಡಿಕೆ ತೋಟದ ಬಳಿಯ ರಸ್ತೆಯ ಹತ್ತಿರ ಪೊಲೀಸರು ಮಹಜರ್ ಮಾಡಿದ್ದು, ಸದರಿ ಮಹಜರ್ ಗೆ ನೀವು ಸಹಿ ಮಾಡಿರುತ್ತೀರಾ ಎಂದರೆ ಸಾಕ್ಷಿ ಸಹಿ ಮಾಡಿರುತ್ತೇನೆಂದು ನುಡಿದಿರುತ್ತಾರೆ, ಯಾವ ವಿಚಾರಕ್ಕೆ ಎಂದರೆ ಮರಳಿನ ವಿಚಾರಕ್ಕೆ ಮಹಜರ್ ಮಾಡಿದ್ದು, ಸದರಿ ಮಹಜರ್ ಗೆ ನಾನು ಸಹಿ ಮಾಡಿರುತ್ತೇನೆಂದು ನುಡಿದಿರುತ್ತಾರೆ.

**<u>ಪಾಟೀ ಸವಾಲು ಃ ಆರೋಪಿ ಪರ  ವಕೀಲರಿಂದ.</u>**

ಮಹಜರ್ ನಲ್ಲಿ ಬರೆದಿವರು ವಿಚಾರ ನನಗೆ ತಿಳಿದಿರುವುದಿಲ್ಲ.

**<u>ಮರುವಿಚಾರಣೆ</u>ಃ** ಇರುವುದಿಲ್ಲ.

**(ತೆರೆದ ನ್ಯಾಯಾಲಯದಲ್ಲಿ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)**

ಓ. ಕೇ. ಸ. ಇ. ಎ. ಒ.

ಸಹಿ/-

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
**ಪ್ರ.ದ.ನ್ಯಾ.ದಂ.ರವರು,ತರೀಕೆರೆ.**